**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

## ಸಿ.ಸಿ.ನಂ. 36/2017

| | | |
|---|---|---|
| ಸಾಕ್ಷಿದಾರರ ಹೆಸರು | : | ಡಾ. ಹರಿಪ್ರಸಾದ್ |
| ತಂದೆಯ ಹೆಸರು | : | ಚೆಲುವೇಗೌಡ |
| ವಯಸ್ಸು | : | 53 ವರ್ಷ |
| ಉದ್ಯೋಗ | : | ಮೂಳೆ ತಜ್ಞರು, ಸಾರ್ವಜನಿಕ ಆಸ್ಪತ್ರೆ, ನಂಜನಗೂಡು. |
| ವಾಸಸ್ಥಳ | : | ನಂಜನಗೂಡು. |

**ಸಾಕ್ಷಿಯನ್ನು ದಿನಾಂಕಃ 29.09.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು 2013 ರಿಂದ ಇಲ್ಲಿಯವರೆಗೂ ನಂಜನಗೂಡು ಸಾರ್ವಜನಿಕ ಆಸ್ಪತ್ರೆಯಲ್ಲಿ ಮೂಳೆ ತಜ್ಞರಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 24.06.2016 ರಂದು ನಾನು ಆಸ್ಪತ್ರೆಯಲ್ಲಿರುವಾಗ ಚಾಸಾ-2 ರವರು ಚಾಸಾ-6 ರವರ ಹಲ್ಲೆಯ ಇತಿಹಾಸದೊಂದಿಗೆ ಆಸ್ಪತ್ರೆಗೆ ಬಂದಿದ್ದು, ಅವರನ್ನು ಪರೀಕ್ಷೆ ಮಾಡಿ ನೋಡಲಾಗಿ ಬಲಾಭಾಗದ ಹಣೆ ಮತ್ತು ಬಲಭಾಗದ ಪಾದದಲ್ಲಿ ನೋವು ಇತ್ತು. ನಾನು ಈ ಬಗ್ಗೆ ನಿಪಿ-5 ರಂತೆ ಗಾಯದ ಪ್ರಮಾಣಪತ್ರ ನೀಡಿರುತ್ತೇನೆ. ಸಾಕ್ಷಿಯು ನಿಪಿ-5 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ, ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು ಗುರುತಿಸಲಾಯಿತು. ಕ್ರಿಕೆಟ್ ಬ್ಯಾಟ್ ನಿಂದ ಹಲ್ಲೆ ಮಾಡಿದರೆ ಮೇಲೆ ಹೇಳಿರುವ ಗಾಯಗಳಾಗುವ ಸಾಧ್ಯತೆಗಳಿರುತ್ತವೆ ಎಂದರೆ ಸರಿ.

**ಪಾಟೀ ಸವಾಲುಃ ಆರೋಪಿಗಳ ಪರ ಶ್ರೀ ಸಿ.ಎಲ್.ಬಿ, ವಕೀಲರಿಂದಃ**

ಯಾವುದೇ ಒಬ್ಬ ವ್ಯಕ್ತಿ ಬಿದ್ದು ಉರುಳಿದಾಗ ನಿಪಿ-5 ರಲ್ಲಿ ನಮೂದಿಸಿರುವ ಗಾಯಗಳಾಗುವ ಸಾಧ್ಯತೆಗಳಿರುತ್ತವೆ ಎಂದರೆ ಸರಿ.

**ಮರು ವಿಚಾರಣೆಃ** ಇರುವುದಿಲ್ಲ.

**(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನಾಯಾಧೀಶರು ಮತ್ತು ಪ್ರ.ದ.ನ್ಯಾದಂ.,**

**ನಂಜನಗೂಡು.**